# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಕ್ರೋಧದಿಂದ ಬುದ್ಧಿ ದುರ್ಬಲವಾಗುತ್ತದೆ..
ಲೋಭದಿಂದ ಸಂಸ್ಕಾರ ದೂರವಾಗುತ್ತದೆ..
ಮೋಹ ಮರ್ಯಾದೆಯನ್ನು ಕೆಡಿಸುತ್ತದೆ..
ಮದ ಜ್ಞಾನವನ್ನು ನುಂಗಿ ಹಾಕುತ್ತದೆ..
ಮಾತ್ಸರ್ಯ ಅಭಿವೃದ್ಧಿಗೆ ಮಾರಕವಾಗುತ್ತದೆ..
ಲಂಚ ಗೌರವವನ್ನು ಹಾಳು ಮಾಡುತ್ತದೆ..
ಚಿಂತೆ ಆಯುಷ್ಯವನ್ನು ಕ್ಷೀಣಿಸುತ್ತದೆ..
ಇದ್ಯಾವುದು ಇಲ್ಲದೇ ಜೀವನ ನಡೆಸಿದರೆ..
ಮಾನವನಾಗಿ ಜನಿಸಿದ್ದು ಸಾರ್ಥಕವಾಗುತ್ತದೆ..

**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 20-12-2024 to 26-12-2024 ಬೆಲೆ: 7-00 ಸಂಪುಟ–4 ಸಂಚಿಕೆ–26 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು



ಕ್ರಿಸ್‌ಮಸ್
ಹಬ್ಬದ ಶುಭಾಶಯಗಳು
ಕರಾವಳಿ ತರಂಗಿಣಿ
ಮಂಗಳೂರು




ಮಂಗಳೂರಿನಲ್ಲಿ ಖಾಸಗಿ ಬಸ್‌ಗಳು ಜನರಿಗೆ ಸಂಚಾರಕ್ಕೆ ಅನಿವಾರ್ಯ ಎನ್ನುವ ಪರಿಸ್ಥಿತಿ ಇರುವುದು ಎಲ್ಲರಿಗೂ ತಿಳಿದಿರುವ ವಿಷಯವೇ. ಆದರೆ ರಾಜ್ಯ ಸರಕಾರದ ಶಕ್ತಿ ಯೋಜನೆ ಬಂದ ನಂತರ ಸರಕಾರಿ ಬಸ್ ಬೇಕು ಎನ್ನುವ ಕೂಗು ಅಲ್ಲಲ್ಲಿ ಕೇಳಿ ಬರುತ್ತಿದೆಯಾದರೂ ಅದಕ್ಕೆ ಹಲವರು ಅಡ್ಡಗಾಲಾಗಿದ್ದಾರೆ. ಇದರ ನಡುವೆ ಖಾಸಗಿ ಬಸ್‌ಗಳ ಅವಾಂತರ ಅಷ್ಟಿಷ್ಟಲ್ಲ. ಖಾಸಗಿ ಬಸ್ಸುಗಳ ಅತೀ ವೇಗ, ಕರ್ಕಶ ಶಬ್ದ. ಅಷ್ಟೇ ಅಲ್ಲದೆ ಖಾಸಗಿ ಬಸ್ಸುಗಳ ಹಾವಳಿಯಿಂದ ಮಹಿಳೆಯರು, ವಯಸ್ಸಾದವರು ವಾಹನ ಚಲಾಯಿಸಲು ಭಯ ಬೀಳುವಂತಾಗಿದೆ. ಇದರ ಬಗ್ಗೆ ಕ್ರಮ ಕೈಗೊಳ್ಳಬೇಕಾಗಿರುವುದು ಅವಶ್ಯವಾಗಿದೆ.

## ಗೃಹಲಕ್ಷ್ಮಿಯನ್ನು ನಿಲ್ಲಿಸುವ ಮಾತೇ ಇಲ್ಲ –ಸಿ ಎಂ



**ಬೆಳಗಾವಿ:** ಮಹಿಳೆಯರು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಬಲರನ್ನಾಗಿಸುವ ಗೃಹಲಕ್ಷ್ಮಿ ಯೋಜನೆಯನ್ನು ನಿಲ್ಲಿಸುವ ಮಾತೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಬೆಳಗಾವಿಯ ಸುವರ್ಣ ಸೌಧಕ್ಕೆ ಆಗಮಿಸಿದ್ದ ಗೃಹಲಕ್ಷ್ಮಿಯರ ಜೊತೆ ಸಂವಾದ ನಡೆಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿ, ಇಂದು ಗೃಹಲಕ್ಷ್ಮಿ ಯೋಜನೆಯ ಹಣದಿಂದ ನಾನಾ ಬದುಕಿನ ಅವಕಾಶಗಳನ್ನು ಸೃಷ್ಟಿಸಿಕೊಂಡ 25ಕ್ಕೂ ಹೆಚ್ಚು ಮಂದಿ ಫಲಾನುಭವಿಗಳನ್ನು ಭೇಟಿ ಮಾಡಿ ಸಂವಾದ **3ನೇ ಪುಟಕ್ಕೆ**


## ಕಾಂಗ್ರೆಸ್‌ನವರಿಗೆ ನೈತಿಕತೆ ಇಲ್ಲ –ಆರ್ ಅಶೋಕ್

**ಬೆಳಗಾವಿ:** ಕಾಂಗ್ರೆಸ್‌ನವರಿಗೆ ಅಂಬೇಡ್ಕರ್ ಫೋಟೋ ಹಿಡಿಯುವ ಯಾವ ನೈತಿಕತೆ ಇದೆ?. ಅವರ ಫೋಟೋ ಹಿಡಿಯುವ ಯೋಗ್ಯತೆ ಇಲ್ಲ ಎಂದು ವಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದರು. ಸುವರ್ಣಸೌಧದಲ್ಲಿ ಮಾತನಾಡಿದ ಅವರು, "ಬಾಣಂತಿಯರ ಮರಣ ಮೃದಂಗ ಬೆಳಗಾವಿಯಿಂದ ಬೆಂಗಳೂರುವರೆಗೆ ವ್ಯಾಪಿಸಿದೆ. ನಾವು ಆರೋಗ್ಯ ಸಚಿವರ ರಾಜೀನಾಮೆಗೆ ಆಗ್ರಹಿಸುತ್ತಿದ್ದೇವೆ. ಅವರ ಮೇಲೆ ಕ್ರಿಮಿಕಲ್ ಕೇಸ್ ಹಾಕುವಂತೆ ಒತ್ತಾಯಿಸಲು ಮುಂದಾಗಿದ್ದೆವು. ಇದು ಕಾಂಗ್ರೆಸ್‌ನವರಿಗೆ ಗೊತ್ತಾಗಿರಬೇಕು. ಮುಡಾ ಅಕ್ರಮದ **3ನೇ ಪುಟಕ್ಕೆ**




## ಸೇತುವೆಗಳ ಜೊತೆ ಜನತೆಗೆ ಭಾವನಾತ್ಮಕ ಸಂಪರ್ಕ

**ಮಂಗಳೂರು:** ಹಲವು ಸವಾಲುಗಳ ನಡುವೆಯೂ ಜನರ ಪ್ರೀತಿ, ವಾತ್ಸಲ್ಯದಿಂದಾಗಿ 140ಕ್ಕೂ ಅಧಿಕ ತೂಗು ಸೇತುವೆಗಳನ್ನು ನಿರ್ಮಿಸಲು ಸಾಧ್ಯವಾಗಿದೆ. ನಾನು ನಿರ್ಮಿಸಿದ ತೂಗು ಸೇತುವೆಗಳ ಜತೆ ಜನರು ಈಗಲೂ ಭಾವನಾತ್ಮಕ ಸಂಪರ್ಕ ಹೊಂದಿದ್ದಾರೆ ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ, ಬ್ರಿಡ್ಜ್ ಮ್ಯಾನ್ ಆಫ್ ಇಂಡಿಯಾ ಎಂದೇ ಖ್ಯಾತರಾಗಿರುವ ಗಿರೀಶ್ ಭಾರದ್ವಾಜ್ ಹೇಳಿದರು. ನಗರದ ಪತ್ರಿಕಾ ಭವನದಲ್ಲಿ ಬುಧವಾರ ಮಂಗಳೂರು ಪ್ರೆಸ್ ಕ್ಲಬ್ ಗೌರವ ಸ್ವೀಕರಿಸಿ, ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಮ್ಮ 40 ವರ್ಷಗಳ **3ನೇ ಪುಟಕ್ಕೆ**









# ಸುದ್ದಿ ತುಣುಕು

ಶೂನ್ಯ ಅವಧಿಯಲ್ಲಿ ಅಂಬೇಡ್ಕರ್ ಕುರಿತು ಶಾ ಹೇಳಿಕೆ ಬಗ್ಗೆ ಕಾಂಗ್ರೆಸ್ – ಬಿಜೆಪಿ ನಡುವೆ ವಾಗ್ವಾದದ ವೇಳೆ ಸಿಟಿ ರವಿ ಲಕ್ಷ್ಮಿ ಹೆಬ್ಬಾಳ್ಕರ್ ಬಗ್ಗೆ ಆಕ್ಷೇಪಾರ್ಹ ಪದ ಬಳಕೆ ಮಾಡಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿದೆ.

ಈವರೆಗೆ ಅನಧಿಕೃತವಾಗಿ ಇರುವ ಎಷ್ಟು ಜನರನ್ನು ಬಂಧಿಸಿದ್ದೀರಿ ಎಂದು ಬಿಜೆಪಿ ಸದಸ್ಯ ಡಿ.ಎಸ್.ಅರುಣ ಕೇಳಿದ ಪ್ರಶ್ನೆಗೆ ಪಾಕಿಸ್ತಾನದ 24, ಬಾಂಗ್ಲಾ ದೇಶದ 159 ಜನರನ್ನು ಬಂಧಿಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ವಿವರಿಸಿದರು.

ಸಿದ್ದಗಂಗಾ ಮಠಕ್ಕೆ ಕೆಐಎಡಿಬಿಯು ನೀರಿನ ವಿದ್ಯುತ್ ಬಿಲ್ ಕಟ್ಟಲು ನೀಡಿದ್ದ ನೋಟಿಸ್ ವಾಪಸ್ ಪಡೆಯಲಾಗುವುದು ಎಂದು ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಕರ್ನಾಟಕ ಮೋಟಾರು ವಾಹನಗಳ ತೆರಿಗೆ ನಿರ್ಧರಣೆ ವಿಧೇಯಕ ಪರಿಷತ್‌ನಲ್ಲೂ ಕೂಡ ಅಂಗೀಕಾರಗೊಂಡಿದೆ.

ಸತತ 15 ಗಂಟೆಗಳ ಕಾಲ ನಿರಂತರವಾಗಿ ಸದನ ನಡೆಸಿದ ಸ್ಪೀಕರ್ ಎಂಬ ಖ್ಯಾತಿಗೆ ಯು.ಟಿ.ಖಾದರ್ ಅವರು ಭಾಜನರಾಗಿದ್ದಾರೆ.

ಲೋಕ ಅದಾಲತ್‌ನಲ್ಲಿ 38 ಲಕ್ಷಕ್ಕೂ ಹೆಚ್ಚು ಪ್ರಕರಣಗಳನ್ನು ಇತ್ಯರ್ಥಪಡಿಸಿರುವುದಾಗಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾದ ಹೈಕೋರ್ಟ್ ನ್ಯಾಯಮೂರ್ತಿ ವಿ.ಕಾಮೇಶ್ವರ್ ರಾವ್ ತಿಳಿಸಿದ್ದಾರೆ.

ಭಾರಿ ಟ್ರಾಫಿಕ್ ಹಿನ್ನೆಲೆಯಲ್ಲಿ ಪೂರ್ವದಲ್ಲಿ ಹೊಸಕೋಟೆ, ಪಶ್ಚಿಮದಲ್ಲಿ ನೆಲಮಂಗಲ ಮತ್ತು ನಗರದ ನೈರುತ್ಯದ ಬಿಡದಿಯವರೆಗೆ ಮೆಟ್ರೋ ರೈಲು ಸೇವೆ ವಿಸ್ತರಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದು ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಕನ್ನಡ ಭಾಷಾ ವಿದ್ವಾಂಸ ಕೆ.ವಿ.ನಾರಾಯಣ ಅವರಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿದೆ.

ಅಮಿತ್ ಶಾ ಕ್ಷಮೆ ಮತ್ತು ರಾಜೀನಾಮೆಗೆ ಒತ್ತಾಯಿಸಿ ಕಾಂಗ್ರೆಸ್ ಪ್ರತಿಭಟನೆ ನಡೆಸಿದರೆ, ಕಾಂಗ್ರೆಸ್ ನಾಯಕರ ನಡೆ ವಿರುದ್ಧ ಬಿಜೆಪಿ ನಾಯಕರು ಕೂಡಾ ಪ್ರತಿಭಟನೆ ನಡೆಸಿದರು.

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಕೊಲ್ಲುವ ಬೆದರಿಕೆ ಹಾಕಿದ್ದ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಜಮ್ಮು – ಕಾಶ್ಮೀರದ ಕುಲ್ಗಾಂನಲ್ಲಿ ಉಗ್ರರು ಮತ್ತು ಭದ್ರತಾ ಪಡೆಗಳ ನಡುವೆ ಗುಂಡಿನ ಚಕಮಕಿ ನಡೆದಿದ್ದು, ಐವರು ಉಗ್ರರನ್ನು ಸೇನೆ ಹೊಡೆದುರುಳಿಸಿದೆ.

ವಿಜಯ್ ದಿವಸ್ ದಿನದಂದು ಪ್ರಧಾನಿ ಮೋದಿ ಅವರು ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ ಭಾರತದ ಐತಿಹಾಸಿಕ ವಿಜಯಕ್ಕೆ ಕಾರಣರಾದ ವೀರ ಸೈನಿಕರ ತ್ಯಾಗವನ್ನು ಉಲ್ಲೇಖಿಸಿ ಪೋಸ್ಟ್‌ವೊಂದನ್ನು ಹಾಕಿದ್ದರು. ಇದಕ್ಕೆ ಬಾಂಗ್ಲಾದೇಶದ ನಾಯಕರು ಟೀಕೆ ವ್ಯಕ್ತಪಡಿಸಿದ್ದಾರೆ.

ರಾಜ್ಯಸಭಾ ಸಂಸದ ಮತ್ತು ಮಾಜಿ ಕೇಂದ್ರ ಸಚಿವ ಶರದ್ ಪವಾರ್ ಅವರು ರಾಷ್ಟ್ರ ರಾಜಧಾನಿಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾದರು.

# ಸಜ್ಜಪ್ಪ



**ಬೇಕಾಗುವ ಸಾಮಗ್ರಿಗಳು :**

ರವೆ – 1 ಕಪ್
ಮೈದಾ – ಕಾಲು ಕಪ್
ಅರಶಿನ ಪುಡಿ – ಕಾಲು ಚಮಚ
ಉಪ್ಪು – ರುಚಿಗೆ ತಕ್ಕಷ್ಟು
ಬಿಸಿ ಎಣ್ಣೆ – 3 ಚಮಚ
ತೆಂಗಿನ ತುರಿ – 1 ಕಪ್
ಬೆಲ್ಲ – ಮುಕ್ಕಾಲು ಕಪ್
ನೀರು – ಕಾಲು ಕಪ್
ಗಸಗಸೆ – 1 ದೊಡ್ಡ ಚಮಚ
ಏಲಕ್ಕಿ ಪುಡಿ – ಅರ್ಧ ಚಮಚ

**ಮಾಡುವ ವಿಧಾನ :**

ಮೊದಲಿಗೆ ಒಂದು ಪಾತ್ರೆಯಲ್ಲಿ ರವೆ, ಮೈದಾ, ಅರಶಿನ ಪುಡಿ, ಉಪ್ಪು, ಬಿಸಿ ಎಣ್ಣೆ ಹಾಗೂ ಬೇಕಾಗುವಷ್ಟು ನೀರನ್ನು ಸೇರಿಸಿ ಚೆನ್ನಾಗಿ ನಾದಿಕೊಂಡು ಹಿಟ್ಟನ್ನು ತಯಾರಿಸಿಕೊಳ್ಳಿ. ಹಿಟ್ಟಿನ ಮೇಲೆ ಸ್ವಲ್ಪ ಸ್ವಲ್ಪ ಎಣ್ಣೆ ಸವರಿ 15 ರಿಂದ 20 ನಿಮಿಷಗಳ ಕಾಲ ಹಾಗೇ ಇಡಬೇಕು. ನಂತರ ಜಾರಿನಲ್ಲಿ ತೆಂಗಿನ ತುರಿಯನ್ನು ನೀರು ಸೇರಿಸದೆ ತರಿತರಿಯಾಗಿ ರುಬ್ಬಿಕೊಳ್ಳಬೇಕು. ಒಂದು ಬಾಣಲೆಯಲ್ಲಿ ಬೆಲ್ಲಕ್ಕೆ ನೀರು ಸೇರಿಸಿ ಬೆಲ್ಲ ಕರಗುವವರೆಗೂ ಕುದಿಸಿ. ನಂತರ ರುಬ್ಬಿದ ತೆಂಗಿನ ತುರಿ, ಗಸಗಸೆಯನ್ನು ಬೆಲ್ಲಕ್ಕೆ ಸೇರಿಸಿ ತೇವಾಂಶ ಆವಿಯಾಗುವವರೆಗೂ ಕಲಸುತ್ತಾ ಬೇಯಿಸಿಕೊಳ್ಳಬೇಕು. ನಂತರ ಏಲಕ್ಕಿ ಪುಡಿ ಹಾಕಿ ಚೆನ್ನಾಗಿ ಕಲಸಿದರೆ ಹೂರಣ ಸಿದ್ಧವಾಯಿತು. ಈಗ ನಾದಿಟ್ಟ ಹಿಟ್ಟನ್ನು ಚೆನ್ನಾಗಿ ನಾದಿಕೊಂಡು ಅದರಿಂದ ಸಣ್ಣ ಭಾಗವನ್ನು ತೆಗೆದುಕೊಂಡು, ಲಟ್ಟಿಸುವ ಮಣೆಗೆ ಸ್ವಲ್ಪ ಎಣ್ಣೆ ಸವರಿ ಕೈಯಿಂದ ವೃತ್ತಾಕಾರವಾಗಿ ತಟ್ಟಬೇಕು. ನಂತರ ಬೆಲ್ಲ–ತೆಂಗಿನ ತುರಿ ಮಿಶ್ರಣವನ್ನು ಹಿಟ್ಟಿನ ಮಧ್ಯೆ ಇಟ್ಟು ಸುತ್ತಲೂ ಮುಚ್ಚಿ ಪೂರಿಯ ಗಾತ್ರಕ್ಕೆ ನಿಧಾನವಾಗಿ ಲಟ್ಟಿಸಿಕೊಂಡು, ಕಾದಿರುವ ಎಣ್ಣೆಯಲ್ಲಿ ಎರಡು ಬದಿಯನ್ನು ಮಧ್ಯಮ ಉರಿಯಲ್ಲಿ ಚೆನ್ನಾಗಿ ಕರಿದುತೆಗೆದರೆ ರುಚಿಯಾದ ಸಜ್ಜಪ್ಪ ಸವಿಯಲು ಸಿದ್ಧ.

# ಪ್ಯಾಲೆಸ್ತೈನ್ ರಾಷ್ಟ್ರ ಸ್ಥಾಪನೆಗೆ ಎಂದಿಗೂ ಒಪ್ಪಲ್ಲ: ಇಸ್ರೇಲ್



ಜೆರುಸಲೇಂ: ಪ್ಯಾಲೆಸ್ತೈನ್ ದೇಶ ಸ್ಥಾಪನೆಗೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸ್ಪಷ್ಟಪಡಿಸಿದ್ದಾರೆ. ಸೌದಿಅರೇಬಿಯಾದೊಂದಿಗಿನ ಸಂಬಂಧವನ್ನು ಸಹಜ ಸ್ಥಿತಿಗೆ ತರುವ ಪ್ರಯತ್ನಗಳ ಭಾಗವಾಗಿ ಪ್ಯಾಲೆ ಸ್ಟೈನ್ ರಾಷ್ಟ್ರ ಸ್ಥಾಪನೆಗೆ ಇಸ್ರೇಲ್ ಒಪ್ಪಿಕೊಂಡಿದೆ ಎಂಬ ವರದಿಯನ್ನು ನೆತನ್ಯಾಹು ತಿರಸ್ಕರಿಸಿದ್ದಾರೆ.

# ವನವಾಟುದಲ್ಲಿ ಭಾರಿ ಭೂಕಂಪ

ಆಸ್ಟೇಲಿಯಾ: ವನವಾಟುದಲ್ಲಿ ಸಂಭವಿಸಿದ ಪ್ರಬಲ ಭೂಕಂಪನದಲ್ಲಿ ಕನಿಷ್ಠ 14 ಜನರು ಸಾವನ್ನಪ್ಪಿದ್ದು, ನೂರಾರು ಜನರು ಗಾಯಗೊಂಡಿದ್ದಾರೆ. ಸಾವಿನ ಸಂಖ್ಯೆ ಇನ್ನೂ ಏರಿಕೆ ಆಗುವ ಸಾಧ್ಯತೆಗಳಿವೆ. ಭಾರಿ ಭೂಕಂಪದಿಂದಾಗಿ ರಸ್ತೆಗಳಿಗೆ ಹಾನಿಯಾಗಿದ್ದು, ವಿದ್ಯುತ್ ಮತ್ತು ಫೋನ್ ಲೈನ್‌ಗಳ ಸಂಪರ್ಕ ಕಡಿತಗೊಂಡಿವೆ. ಇದರಿಂದಾಗಿ ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗುತ್ತಿದೆ ಎಂದು ತಿಳಿದುಬಂದಿದೆ.




# ಹೊಸ ನಿಯಮ ಪ್ರಕಟಿಸಿದ ಬೈಡನ್ ಆಡಳಿತ





ಅಮೇರಿಕ: ಹೊಸ ಅಧ್ಯಕ್ಷರಿಗೆ ಅಧಿಕಾರ ಹಸ್ತಾಂತರ ಮಾಡುವ ಒಂದು ತಿಂಗಳ ಮುಂಚಿತವಾಗಿ ಬೈಡನ್ ಆಡಳಿತ ಮಂಗಳವಾರ H-1B ವೀಸಾಗಳಿಗಾಗಿ ಹೊಸ ನಿಯಮಗಳನ್ನು ಪ್ರಕಟಿಸಿದೆ. ಈ ಹೊಸ ನಿಯಮ ಅಮೆರಿಕನ್ ಕಂಪನಿಗಳಿಗೆ ವಿಶೇಷ ಕೌಶಲ್ಯ ಸೆಟ್‌ಗಳೊಂದಿಗೆ ವಿದೇಶಿ ಉದ್ಯೋಗಿಗಳನ್ನು ನೇಮಿಸಿಕೊಳ್ಳಲು ಅನುಕೂಲ ಮಾಡಿಕೊಡುತ್ತಿದೆ. F-1 ವಿದ್ಯಾರ್ಥಿ ವೀಸಾಗಳನ್ನು ಸರಳವಾಗಿ H-1B ವೀಸಾಗಳಿಗೆ ಪರಿವರ್ತನೆ ಮಾಡಿಕೊಳ್ಳಲು ಅವಕಾಶ ಮಾಡಿಕೊಟ್ಟಿದೆ.

# ಸಿರಿಯಾದಲ್ಲಿ 8 ಲಕ್ಷಕ್ಕೂ ಅಧಿಕ ಜನರ ಸ್ಥಳಾಂತರ

ನ್ಯೂಯಾರ್ಕ್ ಸಿಟಿ: ಸಿರಿಯಾದಲ್ಲಿ ಇತ್ತೀಚಿನ ಯುದ್ಧ ಬಿಕ್ಕಟ್ಟಿನ ಸ್ಥಿತಿಯಿಂದಾಗಿ 8,80,000ಕ್ಕೂ ಅಧಿಕ ಜನರು ಸ್ಥಳಾಂತರಗೊಂಡಿದ್ದಾರೆ ಎಂದು ವಿಶ್ವಸಂಸ್ಥೆಯ ಮಾನವೀಯ ಪರಿಹಾರ ಕಾರ್ಯಕರ್ತರು ತಿಳಿಸಿದ್ದಾರೆ. ಸ್ಥಳಾಂತರಗೊಂಡವರಲ್ಲಿ ಸುಮಾರು 6 ಪ್ರತಿಶತದಷ್ಟು ಜನರು ಕನಿಷ್ಠ ಒಂದು ರೀತಿಯ ಅಂಗವೈಕಲ್ಯದೊಂದಿಗೆ ಬದುಕುತ್ತಿದ್ದಾರೆ ಎಂದು ಯುಎನ್ ಕಾರ್ಯಕರ್ತರು ಅಂದಾಜಿಸಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.



# ಜರ್ಮನಿಯಲ್ಲಿ ಅವಧಿ ಪೂರ್ವ ಚುನಾವಣೆ ಸಾಧ್ಯತೆ



ಬರ್ಲಿನ್: ಜರ್ಮನಿಯ ಚಾನ್ಸಲರ್ ಒಲಾಫ್ ಶೋಲ್ಜ್ ಅವರು ಸೋಮವಾರ ಸಂಸತ್ತಿನಲ್ಲಿ ವಿಶ್ವಾಸ ಮತ ಯಾಚನೆಯಲ್ಲಿ ಸೋತಿದ್ದಾರೆ. ಹೀಗಾಗಿ 2025ರ ಫೆಬ್ರವರಿ 23ರಂದು ನಡೆಯಬೇಕಿದ್ದ ಚುನಾವಣೆಗಳು ಅದಕ್ಕೂ ಮುನ್ನವೇ ನಡೆಯುವ ಸಾಧ್ಯತೆಗಳಿವೆ. ಈ ವರ್ಷದ ನವೆಂಬರ್‌ನಲ್ಲಿ ಮೂರು ಪಕ್ಷಗಳ ಮೈತ್ರಿ ಮುರಿದು ಬಿದ್ದ ನಂತರ ಚಾನ್ಸಲರ್ ಶೋಲ್ಜ್ ತಮ್ಮ ಪಕ್ಷದ ರಾಜಕೀಯ ಭವಿಷ್ಯವನ್ನು ಪುನರುಜ್ಜೀವನಗೊಳಿಸಲು ಚುನಾವಣೆಗಳೇ ಉತ್ತಮ ಮಾರ್ಗ ಎಂದು ಹೇಳಿದ್ದರು.

# ವಿಶ್ವಸಂಸ್ಥೆ ರಾಯಭಾರಿಯೊಂದಿಗೆ ಎಚ್‌ಟಿಎಸ್ ನಾಯಕನ ಭೇಟಿ

ಸಿರಿಯಾ: ಸಿರಿಯಾದ ಹಯಾತ್ ತಹ್ರಿರ್ ಅಲ್–ಶಾಮ್ (ಎಚ್ ಟಿಎಸ್) ನಾಯಕ ಅಹ್ಮದ್ ಅಲ್–ಶಾರಾ ಅವರು ಸಿರಿಯಾದಲ್ಲಿನ ವಿಶ್ವಸಂಸ್ಥೆಯ ವಿಶೇಷ ರಾಯಭಾರಿ ಗೀರ್ ಪೆಡೆರ್ಸನ್ ಅವರನ್ನು ಡಮಾಸ್ಕಸ್‌ನಲ್ಲಿ ಭೇಟಿಯಾಗಿದ್ದಾರೆ. ಸಭೆಯಲ್ಲಿ ದೇಶದಲ್ಲಿನ ರಾಜಕೀಯ ಪರಿವರ್ತನೆಯ ಬಗ್ಗೆ ಚರ್ಚೆ ನಡೆಸಲಾಗಿದೆ ಎಂದು ಸ್ಥಳೀಯ ಅಲ್–ವತನ್ ಆನ್ ಲೈನ್ ಸುದ್ದಿ ಸಂಸ್ಥೆ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಲಾಗಿದೆ.



# 7 ವರ್ಷಗಳ ಬಳಿಕ ಅಮೆರಿಕಕ್ಕೆ ಪಾಕಿಸ್ತಾನ ಏರ್‌ಲೈನ್ಸ್




ಪಾಕಿಸ್ಥಾನ : ಏಳು ವರ್ಷಗಳ ಅಮಾನತು ಆದೇಶದ ಬಳಿಕ ಪಾಕಿಸ್ತಾನ ಇಂಟರ್‌ನ್ಯಾಷನಲ್ ಏರ್‌ಲೈನ್ಸ್ (PIA) ಅಮೆರಿಕಕ್ಕೆ ತನ್ನ ವಿಮಾನಯಾನವನ್ನು ಪುನಾರಂಭಿಸಲಿದೆ. ಇದು ದೇಶದ ವಾಯುಯಾನ ವಲಯಕ್ಕೆ ಮಹತ್ವದ ಬೆಳವಣಿಗೆಯಾಗಿದೆ ಎಂದು ಅಧಿಕೃತ ಮಾಧ್ಯಮ ಸಂಸ್ಥೆ ವರದಿ ಮಾಡಿದೆ. ಅಮೆರಿಕದ ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ನಡುವೆ ಬಾಕಿ ಉಳಿದಿರುವ ಹಣಕಾಸಿನ ಬಾಧ್ಯತೆಗಳನ್ನು ಇತ್ಯರ್ಥಗೊಳಿಸಲು ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ.

# ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಆರ್. ಅಶ್ವಿನ್ ನಿವೃತ್ತಿ

ಆಸ್ಟೇಲಿಯಾ: ಭಾರತ ಮತ್ತು ಆಸ್ಟೇಲಿಯಾ ನಡುವಿನ ಬಾರ್ಡರ್–ಗವಾಸ್ಕರ್ ಟೆಸ್ಟ್ ಸರಣಿಯ ನಡುವೆಯೇ ಅನುಭವಿ ಸ್ಪಿನ್ ಬೌಲರ್ ಆರ್. ಅಶ್ವಿನ್ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಘೋಷಣೆ ಮಾಡಿದ್ದಾರೆ. 2011ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಅಶ್ವಿನ್ ಟೆಸ್ಟ್‌ಗೆ ಪದಾರ್ಪಣೆ ಮಾಡಿದ್ದರು. ಟೆಸ್ಟ್‌ನಲ್ಲಿ 24ರ ಸರಾಸರಿಯಲ್ಲಿ 537 ವಿಕೆಟ್ ಕಬಳಿಸಿದ್ದಾರೆ.



# ಆಸ್ಟೇಲಿಯಾ ಮತ್ತು ಭಾರತ ಮೂರನೇ ಟೆಸ್ಟ್ ಪಂದ್ಯ ಡ್ರಾ



ಬ್ರಿಸ್ಟೇನ್: ಆತಿಥೇಯ ಆಸ್ಟ್ರೇಲಿಯಾ ಮತ್ತು ಭಾರತ ನಡುವೆ ಇಲ್ಲಿನ ಗಾಬಾ ಮೈದಾನದಲ್ಲಿ ನಡೆದ ಮೂರನೇ ಟೆಸ್ಟ್ ಪಂದ್ಯ ಡ್ರಾದಲ್ಲಿ ಅಂತ್ಯ ಕಂಡಿದೆ. ಇದರೊಂದಿಗೆ ಕೊನೆಯ ದಿನದಾಟದಲ್ಲಿ ರೋಚಕತೆಗಾಗಿ ಕಾದಿದ್ದ ಅಭಿಮಾನಿಗಳಿಗೆ ನಿರಾಸೆ ಉಂಟಾಗಿದೆ. ಸತತವಾಗಿ ಸುರಿದ ಮಳೆ ಪಂದ್ಯಕ್ಕೆ ಅಡ್ಡಿಯಾಗಿತ್ತು. ಇದರಿಂದಾಗಿ ಪಂದ್ಯ ಮುಂದುವರಿಸಲು ಸಾಧ್ಯವಾಗಿಲ್ಲ.

# ಡಬಲ್ ಹ್ಯಾಟ್ರಿಕ್‌ನೊಂದಿಗೆ ಚರಿತ್ರೆ ಸೃಷ್ಟಿಸಿದ ಬೌಲರ್!

ಕ್ರಿಕೆಟ್‌ನಲ್ಲಿ ಹ್ಯಾಟ್ರಿಕ್ ವಿಕೆಟ್ ಪಡೆಯುವುದು ಸುಲಭದ ಮಾತಲ್ಲ, ಆದರೆ ಇಲ್ಲೊಬ್ಬ ಬೌಲರ್ ಡಬಲ್ ಹ್ಯಾಟ್ರಿಕ್ ವಿಕೆಟ್ ಪಡೆದು ಚರಿತ್ರೆ ಸೃಷ್ಟಿಸಿದ್ದಾರೆ. ಐಸಿಸಿ ಪುರುಷರ T20 ವಿಶ್ವಕಪ್ ಅಮೆರಿಕ ಸಬ್ ರೀಜಿನಲ್ ಕ್ವಾಲಿಫೈಯರ್ ಪಂದ್ಯದಲ್ಲಿ ಈ ದಾಖಲೆ ನಿರ್ಮಾಣವಾಗಿದೆ. ಸೈಮನ್ ಐಲ್ಯಾಂಡ್ಸ್ ವಿರುದ್ಧ ನಡೆದ ಪಂದ್ಯದಲ್ಲಿ ಅರ್ಜೆಂಟೀನಾದ ಹೆರ್ನಾನ್ ಫೆನ್ನೆಲ್ ಡಬಲ್ ಹ್ಯಾಟ್ರಿಕ್ ಸಾಧನೆ ಮಾಡಿದ್ದಾರೆ.



# ಶೇ.95ರಷ್ಟು ವಕ್ಫ್ ಆಸ್ತಿ ಮುಸ್ಲಿಮರಿಂದಲೇ ಒತ್ತುವರಿ



ಬೆಳಗಾವಿ: ಶೇ.95ರಷ್ಟು ವಕ್ಫ್ ಆಸ್ತಿಯಲ್ಲಿ ಒತ್ತುವರಿ ಮಾಡಿರುವುದು ಮುಸ್ಲಿಮರೇ ಎಂದು ಸಚಿವ ಜಮೀರ್ ಅಹ್ಮದ್ ಖಾನ್ ಸ್ಪಷ್ಟಪಡಿಸಿದರು. ರೈತರ ಜಮೀನು ವಕ್ಫ್ ಹೆಸರಲ್ಲಿ ಮಾಡಿ ಅಂತ ನಾನು ಸೂಚನೆ ಕೊಡಲಿಲ್ಲ. ರಾಜ್ಯದಲ್ಲಿ 1.28 ಲಕ್ಷ ಕೋಟಿ ವಕ್ಫ್‌ಗೆ ಸೇರಿದ ಆಸ್ತಿ ಇದೆ. 17,963 ಎಕರೆ ವಕ್ಫ್ ಆಸ್ತಿ ಖಾಸಗಿಯವರು ಕಬಳಿಸಿದ್ದಾರೆ, ಇದರಲ್ಲಿ ಶೇ.95ರಷ್ಟು ಮುಸ್ಲಿಮರೇ ಕಬಳಿಸಿದ್ದಾರೆ. ಈ ಕಬಳಿಕೆ ತೆರವಿಗೆ ನೋಟಿಸ್ ಕೊಟ್ಟಿದ್ದೇವೆಯೇ ಹೊರತು ರೈತರು, ಮಠ ಮಂದಿರಗಳ ಜಮೀನಿಗೆ ಕೊಟ್ಟಿಲ್ಲ ಎಂದರು.

# ದೆಹಲಿ ರೈತ ಹೋರಾಟ ಬೆಂಬಲಿಸಿ ರೈಲು ತಡೆಗೆ ಯತ್ನ

ಮೈಸೂರು: ದೆಹಲಿ ರೈತ ಮುಖಂಡರ ಹೋರಾಟ ಬೆಂಬಲಿಸಿ ರೈಲು ತಡೆಗೆ ಮುಂದಾದ ರೈತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ನೇತೃತ್ವದಲ್ಲಿ ನೂರಾರು ರೈತರು ಮೈಸೂರಿನ ರೈಲ್ವೆ ನಿಲ್ದಾಣಕ್ಕೆ ರೈಲು ತಡೆ ಚಳುವಳಿ ನಡೆಸಲು ಮುಂದಾದಾಗ ಪೊಲೀಸರು ತಡೆದರು. ಈ ವೇಳೆ ಮಾತಿನ ಚಕಮಕಿ ನಡೆಯಿತು. ಪೊಲೀಸರ ಕ್ರಮ ಖಂಡಿಸಿ ಕುರುಬೂರು ಆಕ್ರೋಶ ವ್ಯಕ್ತಪಡಿಸಿದರು.



# ಮಹಾ ಸಂಪುಟ ವಿಸ್ತರಣೆ ಬೆನ್ನಲ್ಲೇ ಭುಗಿಲೆದ್ದ ಅಸಮಾಧಾನ

ಮುಂಬೈ: ಮಹಾರಾಷ್ಟ್ರದ ಮಹಾಯುತಿ ಸರ್ಕಾರದ ಸಂಪುಟ ವಿಸ್ತರಣೆ ಮಾಡಲಾಗಿದೆ. 39 ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಈ ನಡುವೆ ತಮಗೆ ಸಚಿವ ಸ್ಥಾನ ಸಿಕ್ಕಿಲ್ಲ ಎಂದು ಅಸಮಾಧಾನಗೊಂಡ ಶಿವಸೇನಾ ಶಾಸಕ ನರೇಂದ್ರ ಭೋಂಡೇಕರ್ ಪಕ್ಷದ ತಮ್ಮ ಎಲ್ಲ ಸ್ಥಾನಗಳಿಗೆ ರಾಜೀನಾಮೆ ಸಲ್ಲಿಸಿದ್ದಾರೆ. ವಿಧಾನಸಭಾ ಚುನಾವಣೆಯಲ್ಲಿ ಭಂಡಾರಾ ಕ್ಷೇತ್ರದಿಂದ ಗೆಲುವು ಕಂಡಿದ್ದ ಭೋಂಡೇಕರ್, ಎದುರಾಳಿ ಕಾಂಗ್ರೆಸ್ ಅಭ್ಯರ್ಥಿ ವಿರುದ್ಧ 38,000 ಮತಗಳಿಂದ ಜಯಗಳಿಸಿದ್ದರು.



# ಉತ್ತರ ಕರ್ನಾಟಕಕ್ಕೆ ರಾಜಕೀಯವಾಗಿ ಅನ್ಯಾಯ : ಯತ್ನಾಳ್

ಬೆಳಗಾವಿ: ಉತ್ತರ ಕರ್ನಾಟಕ ಭಾಗಕ್ಕೆ ಅಭಿವೃದ್ಧಿಯಲ್ಲಷ್ಟೇ ಅಲ್ಲದೆ ರಾಜಕೀಯವಾಗಿಯೂ ಅನ್ಯಾಯವಾಗಿದೆ ಎಂದು ಬಿಜೆಪಿ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಗ್ಯಾರಂಟಿ ನೀಡುವ ಬದಲಾಗಿ ನೀರಾವರಿ ಕಲ್ಪಿಸಿ ಎಲ್ಲಾ ಕೈಗಳಿಗೆ ಉದ್ಯೋಗ ಕೊಡಿ. ಉತ್ತರ ಕರ್ನಾಟಕ ಭಾಗಕ್ಕೆ ತನ್ನದೇ ಆದ ವೈಭೋಗವಿದೆ. ಸೇರಿದಂತೆ ಉತ್ತರ ಕರ್ನಾಟಕ ಭಾಗದಲ್ಲಿ ಬರಕ್ಕೆ ತುತ್ತಾಗಿ ತುತ್ತು ಅನ್ನಕ್ಕೂ ಪರದಾಡುವಂತಹ ಪರಿಸ್ಥಿತಿಯಲ್ಲಿರುವ ಕುಟುಂಬಗಳಿವೆ ಎಂದು ಹೇಳಿದರು.



# ಗ್ಯಾರಂಟಿ ಯೋಜನೆಗಳು ಪ್ರಚಾರ ಕಳೆದುಕೊಳ್ತಿವೆ: ಟಿ.ಬಿ.ಜಯಚಂದ್ರ



ಬೆಳಗಾವಿ: "ಗ್ಯಾರಂಟಿ ಯೋಜನೆಗಳನ್ನು ನೀಡಿರುವುದೇ ತಪ್ಪು ಎಂಬಂತೆ ವಿರೋಧ ಪಕ್ಷಗಳು ಇವುಗಳನ್ನು ಬಿಟ್ಟಿ ಭಾಗ್ಯ ಎಂದು ಟೀಕಿಸುತ್ತಿವೆ" ಎಂದು ಮಾಜಿ ಸಚಿವ ಹಾಗೂ ರಾಜ್ಯ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಬೇಸರ ವ್ಯಕ್ತಪಡಿಸಿದ್ದಾರೆ. ನಮ್ಮ ಸರ್ಕಾರದ ಯೋಜನೆಗಳಿಗೆ ಹೆಚ್ಚು ಪ್ರಚಾರ ದೊರೆಯುವ ಕೆಲಸವಾಗಬೇಕು. ಗ್ಯಾರಂಟಿಗಳು ಮಧ್ಯವರ್ತಿಗಳ ಹಾವಳಿಯಿಲ್ಲದೆ ನೇರವಾಗಿ ಫಲಾನುಭವಿಗಳನ್ನು ತಲುಪುತ್ತಿದೆ. ಈ ವಾಸ್ತವತೆಯನ್ನು ನಾವು ಅರಿತುಕೊಳ್ಳಬೇಕು" ಎಂದರು.

# ಅದಾನಿ ವಂಚನೆ ಪ್ರಕರಣ ಮುಚ್ಚಿಹಾಕಲು ಪ್ಲಾನ್ : ಸಂತೋಷ ಲಾಡ್

ಬೆಳಗಾವಿ: "ನಾವು ರಾಜ್ಯದ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿರುವುದು ಅದು ಕೂಡ ಒಂದು ಸಾಧನೆಯಾಗಿದೆ. ಸುಮಾರು 56–60 ಸಾವಿರ ಕೋಟಿ ಹಣವನ್ನು ಜನರಿಗೆ ಗ್ಯಾರಂಟಿ ನೀಡುತ್ತಿರುವುದು, ಇದು ಸಹ ಒಂದು ರೀತಿಯಲ್ಲಿ ಅಭಿವೃದ್ಧಿಯೇ ಆಗಿದೆ" ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಸಮರ್ಥಿಸಿಕೊಂಡರು. "ಕೇಂದ್ರ ಸರ್ಕಾರದಲ್ಲಿ ಅದಾನಿ ಬಹುಕೋಟಿ ವಂಚನೆ ಪ್ರಕರಣ ಮುಚ್ಚಿಹಾಕಲು ಒನ್ ನೇಷನ್, ಒನ್ ಎಲೆಕ್ಷನ್ ಪ್ರಾರಂಭಿಸಲಾಗಿದೆ" ಎಂದು ಆರೋಪಿಸಿದರು.



# ವಿಲ್ ನೋಂದಣಿ ಕಾಯಿದೆಗಳಿಗೆ ತಿದ್ದುಪಡಿ ಅಗತ್ಯ

ಬೆಂಗಳೂರು: ಇತ್ತೀಚಿನ ದಿನಗಳಲ್ಲಿ ಉಯಿಲು (ವಿಲ್) ಉಲ್ಲಂಘನೆ ಪ್ರಕರಣಗಳ ಕುರಿತು ಅಸಮಾಧಾನ ವ್ಯಕ್ತಪಡಿಸಿರುವ ಹೈಕೋರ್ಟ್, ಅಕ್ರಮ ನಿಯಂತ್ರಿಸಲು ಉಯಿಲು ಮಾಡುವ ಸಂದರ್ಭದಲ್ಲಿ ಆಧುನಿಕ ತಂತ್ರಜ್ಞಾನ ಬಳಸಿ ನೋಂದಣಿ ಮಾಡಿಸುವ ಕುರಿತು ಕಾಯಿದೆಗಳಿಗೆ ಅಗತ್ಯ ತಿದ್ದುಪಡಿ ತರಬೇಕು ಎಂದು ಸೂಚನೆ ನೀಡಿದೆ. ಕುಟುಂಬವೊಂದರ ವಿಲ್ ವ್ಯಾಜ್ಯದ ವಿಚಾರಣೆಯನ್ನು ಧಾರವಾಡ ಪೀಠದಲ್ಲಿ ನಡೆಸಿದ ನ್ಯಾ.ಅನಂತರಾಮ ಹೆಗಡೆ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.



# ಶಾ ಕಾಂಗ್ರೆಸ್‌ನ ಕುತಂತ್ರವನ್ನು ಬಯಲಿಗೆಳೆದಿದ್ದಾರೆ: ಪ್ರಧಾನಿ ಮೋದಿ

ನವದೆಹಲಿ: ಗೃಹ ಸಚಿವ ಅಮಿತ್ ಶಾ ಅವರು ಡಾ. ಬಿ. ಆರ್. ಅಂಬೇಡ್ಕರ್ ಅವರಿಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸುತ್ತಿರುವ ಕಾಂಗ್ರೆಸ್ ನಾಯಕರನ್ನು ಪ್ರಧಾನಿ ನರೇಂದ್ರ ಮೋದಿ ಅವರು ತರಾಟೆಗೆ ತೆಗೆದುಕೊಂಡಿದ್ದಾರೆ. "ಅಂಬೇಡ್ಕರ್ ಬಗ್ಗೆ ಕಾಂಗ್ರೆಸ್ ಹೊಂದಿರುವ ಧೋರಣೆಯನ್ನು ಅಮಿತ್ ಶಾ ಅವರು ರಾಜ್ಯಸಭೆಯಲ್ಲಿ ಬಿಚ್ಚಿಟ್ಟಿದ್ದಾರೆ, ದಿಗ್ಭ್ರಮೆಗೊಂಡಿರುವ ಆ ಪಕ್ಷವು ಅಮಿತ್ ಶಾ ವಿರುದ್ಧ ಸುಳ್ಳು ಮಾಹಿತಿ ಹರಡುತ್ತಿದೆ" ಎಂದಿದ್ದಾರೆ.




# NTA ಈಗ ಪ್ರವೇಶ ಪರೀಕ್ಷೆಗಳಿಗೆ ಮಾತ್ರ ಸೀಮಿತ




ನವದೆಹಲಿ: NTA 2025 ಪರೀಕ್ಷೆಗಳಲ್ಲಿ ಅನೇಕ ಕ್ರಾಂತಿಕಾರಿ ಬದಲಾವಣೆಗಳನ್ನು ತರಲಾಗುವುದು ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. 2025ರಿಂದ ಎನ್‌ಟಿಎ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಪ್ರವೇಶ ಪರೀಕ್ಷೆಗಳನ್ನು ಮಾತ್ರ ನಡೆಸುತ್ತದೆ ಮತ್ತು ಸರ್ಕಾರಿ ಉದ್ಯೋಗಗಳಿಗೆ ನೇಮಕಾತಿ ಪರೀಕ್ಷೆಗಳನ್ನು ನಡೆಸುವುದಿಲ್ಲ ಎಂದು ಅವರು ಇದೇ ವೇಳೆ ಸ್ಪಷ್ಟಪಡಿಸಿದ್ದಾರೆ. 2025ರಲ್ಲಿ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯನ್ನೂ ಸಂಪೂರ್ಣವಾಗಿ ಶುದ್ಧೀಕರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

# ಸಂಭಾಲ್‌ನಲ್ಲಿ ಹಲವು ವರ್ಷಗಳಿಂದ ಮುಚ್ಚಿದ್ದ ದೇಗುಲ ಓಪನ್

ಉತ್ತರ ಪ್ರದೇಶ: ಸಂಭಾಲ್‌ನಲ್ಲಿ ಒತ್ತುವರಿ ತೆರವುಗೊಳಿಸುತ್ತಿರುವ ಪೊಲೀಸರು ದಶಕಗಳಿಗೂ ಹೆಚ್ಚು ಕಾಲದಿಂದ ಬಂದ್ ಆಗಿದ್ದ ಮತ್ತೊಂದು ದೇಗುಲವನ್ನು ಪತ್ತೆ ಮಾಡಿದ್ದಾರೆ. ಸರಯತರೀನ್ ಪ್ರದೇಶದಲ್ಲಿರವ ರಾಧಾ ಕೃಷ್ಣ ದೇಗುಲವನ್ನು ತೆರೆಯಲಾಗಿದೆ. ಈ ದೇಗುಲದಲ್ಲಿ ಹಿಂದೆ ಹಬ್ಬ–ಹರಿದಿನಗಳ ಸಂದರ್ಭಗಳಲ್ಲಿ ಪೂಜೆ ನಡೆಯುತ್ತಿತ್ತು. ಕಳೆದ 10 ವರ್ಷದಿಂದ ಸಂಪೂರ್ಣಬಂದ್ ಆಗಿತ್ತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಈ ಪ್ರದೇಶದಲ್ಲಿ ದೇಗುಲವಿರುವ ಕುರಿತು ಅಧಿಕಾರಿಗಳು ಮಾಹಿತಿ ಪಡೆದಿದ್ದರು.




# ದೆಹಲಿ ವಿವಿ ಕಾನೂನು ವಿಭಾಗದಲ್ಲಿ ಬೃಹತ್ ಪ್ರತಿಭಟನೆ

ನವದೆಹಲಿ: ದೆಹಲಿ ವಿಶ್ವವಿದ್ಯಾಲಯದ ಕಾನೂನು ವಿಭಾಗದ ವಿದ್ಯಾರ್ಥಿಗಳು ಪರೀಕ್ಷಾ ದಿನಾಂಕವನ್ನು 10 ದಿನಗಳವರೆಗೆ ಮುಂದೂಡುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು. ಈ ವೇಳೆ, ವಿದ್ಯಾರ್ಥಿಗಳು ಹಾಗೂ ಪೊಲೀಸರ ನಡುವೆ ಮಾತಿನ ಚಕಮಕಿ ನಡೆದು, ಪರಿಸ್ಥಿತಿ ನಿಯಂತ್ರಿಸಲು ಪೊಲೀಸರು ಯಾವುದೇ ಎಚ್ಚರಿಕೆ ನೀಡದೇ ವಿದ್ಯಾರ್ಥಿಗಳ ಮೇಲೆ ಲಾಠಿ ಚಾರ್ಜ್ ಮಾಡಿದ್ದಾರೆ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಜೊತೆಗೆ ತಮ್ಮ ಬೇಡಿಕೆ ಈಡೇರಿಸುವಂತೆ ವಿದ್ಯಾರ್ಥಿಗಳು ಪಟ್ಟು ಮುಂದುವರಿಸಿದ್ದಾರೆ.



# ಚೀನಾಕ್ಕೆ ಭೇಟಿ ನೀಡಲಿರುವ ಅಜಿತ್ ದೋವಲ್

ನವದೆಹಲಿ: ಐದು ವರ್ಷಗಳ ಅಂತರದ ನಂತರ ಭಾರತ ಮತ್ತು ಚೀನಾ ಗಡಿ ಪ್ರಶ್ನೆಗೆ ಸಂಬಂಧಿಸಿದಂತೆ ಬೀಜಿಂಗ್‌ನಲ್ಲಿ ವಿಶೇಷ ಪ್ರತಿನಿಧಿಗಳ ಸಭೆ ನಡೆಯಲಿದೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ನೇತೃತ್ವದ ನಿಯೋಗ ಚೀನಾದೊಂದಿಗೆ ಮಹತ್ವದ ಸಭೆ ನಡೆಸಲಿದೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯ ಈ ಬಗ್ಗೆ ಹೇಳಿಕೆ ನೀಡಿದ್ದು, ವಿಶೇಷ ಪ್ರತಿನಿಧಿಗಳ ಸಂವಾದದ ಕುರಿತು ಮಾಹಿತಿ ನೀಡಿದೆ. ಭಾರತ ಚೀನಾ ವಿಶೇಷ ಪ್ರತಿನಿಧಿಗಳ ಸಭೆ ಡಿಸೆಂಬರ್ 2019ರಲ್ಲಿ ನವದೆಹಲಿಯಲ್ಲಿ ನಡೆಸಲಾಗಿತ್ತು.



# ಸರ್ಕಾರದ ನಡೆಗೆ ಮದ್ರಾಸ್ ಹೈಕೋರ್ಟ್ ಅಸಮಾಧಾನ



ತಮಿಳುನಾಡು: ತಮಿಳುನಾಡು ಸರ್ಕಾರಿ ಉದ್ಯೋಗಿಗಳಿಗೆ ಸಂಬಂಧಿಸಿದ ಭ್ರಷ್ಟಾಚಾರ ಪ್ರಕರಣಗಳಲ್ಲಿ ರಾಜ್ಯ ಸರ್ಕಾರ ಅನುಸರಿಸುತ್ತಿರುವ ವಿಳಂಬ ಕ್ರಮಕ್ಕೆ ಮದ್ರಾಸ್ ಹೈಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ನ್ಯಾ.ಎಸ್.ಎಂ.ಸುಬ್ರಮಣಿಯಂ ಮತ್ತು ನ್ಯಾ. ಎಂ.ಜ್ಯೋತಿರಮಣ್ ಅವರಿದ್ದ ವಿಭಾಗೀಯ ಪೀಠ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿತು. ಅನೇಕ ದೂರುಗಳ ಹೊರತಾಗಿಯೂ ಭ್ರಷ್ಟಾಚಾರವಿಲ್ಲದೆ ಸಾರ್ವಜನಿಕರಿಗೆ ಮೂಲಭೂತ ಸೌಲಭ್ಯವನ್ನು ನೀಡಲಾಗುತ್ತಿಲ್ಲ ಎಂದು ತಿಳಿಸಿತು.




## 'ಮ್ಯಾಕ್ಸ್' ಡಿಸೆಂಬರ್ 25ರಂದು ಬಿಡುಗಡೆ..




ಕಲೈಪುಲಿ ಎಸ್ ತನು ವಿ ಕ್ರಿಯೇಷನ್ಸ್ ಹಾಗೂ ಕಿಚ್ಚ ಕ್ರಿಯೇಷನ್ಸ್ ನಿರ್ಮಾಣದ, ವಿಜಯ್ ಕಾರ್ತಿಕೇಯ ನಿರ್ದೇಶನದ ಹಾಗೂ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಾಯಕರಾಗಿ ನಟಿಸಿರುವ "ಮ್ಯಾಕ್ಸ್" ಚಿತ್ರಕ್ಕಾಗಿ ಅನೂಪ್ ಭಂಡಾರಿ ಅವರು ಬರೆದಿರುವ, ವಿಜಯ್ ಪ್ರಕಾಶ್ ಹಾಡಿರುವ ಹಾಗೂ ಅಜನೀಶ್ ಲೋಕನಾಥ್ ಸಂಗೀತ ನೀಡಿರುವ ಲಿರಿಕಲ್ ವಿಡಿಯೋ ಇತ್ತೀಚೆಗೆ ಅದ್ದೂರಿಯಾಗಿ ಬಿಡುಗಡೆಯಾಯಿತು. ಓರಾಯನ್ ಮಾಲ್‌ನ ಆವರಣದಲ್ಲಿರುವ ಕೆರೆಯಂಗಳದಲ್ಲಿ ನಡೆದ ವರ್ಣರಂಜಿತ ಸಮಾರಂಭಕ್ಕೆ ಸಹಸ್ರಾರು ಅಭಿಮಾನಿಗಳು ಸಾಕ್ಷಿಯಾದರು. "ಮ್ಯಾಕ್ಸ್" ಚಿತ್ರದ ಹಾಡಿಗೆ ಹಾಗೂ ಟ್ರೇಲರ್‌ಗೆ ಅಭಿಮಾನಿಗಳು ಫಿದಾ ಆದರು. ಕಿಚ್ಚ ಸುದೀಪ್, ನಿರ್ಮಾಪಕ ಕಲೈಪುಲಿ ಎಸ್ ತನು, ನಿರ್ದೇಶಕ ವಿಜಯ್ ಕಾರ್ತಿಕೇಯ, ಸಂಯುಕ್ತ ಹೊರನಾಡು, ಸುಕೃತ ವಾಗ್ಲೆ ಸಮಾರಂಭದಲ್ಲಿ ಉಪಸ್ಥಿತರಿದ್ದರು.

## 2000ಕ್ಕೂ ಅಧಿಕ ಸ್ಕ್ರೀನ್‌ಗಳಲ್ಲಿ 'ಯುಐ' ಬಿಡುಗಡೆ..



ಒಂಭತ್ತು ವರ್ಷಗಳ ನಂತರ ರಿಯಲ್ ಸ್ಟಾರ್ ಉಪೇಂದ್ರ ಅವರು ನಿರ್ದೇಶಿಸಿ, ನಟಿಸಿರುವ 'ಯುಐ' ಡಿಸೆಂಬರ್ 20ರಂದು ಕನ್ನಡ ಸೇರಿದಂತೆ ಐದು ಭಾಷೆಗಳಲ್ಲಿ ವಿಶ್ವದಾದ್ಯಂತ 2000ಕ್ಕೂ ಅಧಿಕ ಸ್ಕ್ರೀನ್ ಗಳಲ್ಲಿ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಲಹರಿ ಫಿಲಂಸ್ ಹಾಗೂ ವೀನಸ್ ಎಂಟರ್ ಪ್ರೈಸಸ್ ಲಾಂಛನದಲ್ಲಿ ಜಿ. ಮನೋಹರನ್ ಹಾಗೂ ಕೆ. ಪಿ. ಶ್ರೀಕಾಂತ್ ಈ ಚಿತ್ರವನ್ನು ನಿರ್ಮಿಸಿದ್ದಾರೆ. ನವೀನ್ ಮನೋಹರ್ ಅವರ ಸಹ ನಿರ್ಮಾಣ ಹಾಗೂ ತುಳಸಿರಾಮ ನಾಯ್ಡು(ಲಹರಿ ವೇಲು), ಜಿ.ರಮೇಶ್, ಜಿ.ಆನಂದ್, ಚಂದ್ರು ಮನೋಹರನ್ ಹಾಗೂ ನಾಗೇಂದ್ರ ಅವರು ಕಾರ್ಯಕಾರಿ ನಿರ್ವಾಪಕರಾಗಿರುವ ಈ ಚಿತ್ರದಲ್ಲಿ ಉಪೇಂದ್ರ ಅವರಿಗೆ ಜೋಡಿಯಾಗಿ ರೀಷ್ಮಾ ನಾಣಯ್ಯ ನಟಿಸಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ ನೀಡಿದ್ದಾರೆ.

## ಫೆ.7ಕ್ಕೆ ರೂಪೇಶ್ ಶೆಟ್ಟಿ ಅಧಿಪತ್ರ..



ಸ್ಯಾಂಡಲ್‌ವುಡ್‌ನ ಭರವಸೆ ನಟ ರೂಪೇಶ್ ಶೆಟ್ಟಿ ಅಭಿನಯದ ಅಧಿಪತ್ರ ಸಿನಿಮಾ ತೆರೆಗೆ ಬರಲು ರೆಡಿಯಾಗಿದೆ. ಫೆಬ್ರವರಿ 7ಕ್ಕೆ ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಟೀಸರ್ ಮೂಲಕ ಕುತೂಹಲ ಹೆಚ್ಚಿಸಿರುವ ಅಧಿಪತ್ರದಲ್ಲಿ ಕರಾವಳಿ ಭಾಗದ ಕಥೆಯನ್ನು ಕಟ್ಟಿಕೊಡಲಾಗಿದೆ. ಕರಾವಳಿ ಭಾಗದ ವಿಶೇಷ ಆಚರಣೆಗಳಾದ ಆಟಿ ಕಳಂಜಾ, ಯಕ್ಷಗಾನ, ಹುಲಿ ಕುಣಿತ ಜೊತೆಗೆ ಅಧಿಪತ್ರ ಚಿತ್ರದಲ್ಲಿ ಹೊಸ ರೀತಿಯ ಕಥೆಯನ್ನೆ ಹೆಣೆಯಲಾಗಿದೆ. ಚಯನ್ ಶೆಟ್ಟಿ ಒಂದ್ ಒಳ್ಳೆ ಗಟ್ಟಿಕಥೆಯ ಜೊತೆಗೆ ಅದ್ಭುತ ಮೇಕಿಂಗ್ ಕೂಡ ಮಾಡಿದ್ದಾರೆ ಅದನ್ನ ಕರಾವಳಿ ಭಾಗದಲ್ಲಿಯೇ ಚಿತ್ರೀಕರಣ ಮಾಡಿದ್ದಾರೆ. ಈಗಾಗಲೇ ಚಿತ್ರದ ಡಬ್ಬಿಂಗ್ ಹಾಗೂ ಓಟಿಟಿ ಹಕ್ಕುಗಳಿಗೆ ಬೇಡಿಕೆ ಬಂದಿದೆ. ಅಧಿಪತ್ರ ಚಿತ್ರದಲ್ಲಿ ರೂಪೇಶ್ ಶೆಟ್ಟಿಗೆ ನಿರೂಪಕಿ ಜಾಹ್ನವಿ ಜೋಡಿ ಆಗಿದ್ದಾರೆ. ಅಧಿಪತ್ರ ಸಿನಿಮಾದಲ್ಲಿ ನುರಿತ ಕಲಾವಿದರೇ ನಟಿಸಿದ್ದಾರೆ.

## ಶಿವಣ್ಣನಿಗೆ ಒಡೆಯರ್ ಓಂಕಾರ..

ಭೈರತಿ ರಣಗಲ್ ಬ್ಲಾಕ್ ಬಸ್ಟರ್ ಸಕ್ಸಸ್ ಖುಷಿಯಲ್ಲಿರುವ ಭಜರಂಗಿ ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ಈಗಾಗಲೇ ಸಾಲು ಸಾಲು ಚಿತ್ರಗಳಲ್ಲಿ ಬ್ಯುಸಿಯಾಗಿರುವ 'ಸೆಂಚುರಿ ಸ್ಟಾರ್' ಶಿವರಾಜ್‌ಕುಮಾರ್ ಸ್ಯಾಂಡಲ್‌ವುಡ್‌ನ ಯಶಸ್ವಿ ನಿರ್ದೇಶಕರಾದ ಪವನ್ ಒಡೆಯರ್ ಜೊತೆ ಕೈ ಜೋಡಿಸಿದ್ದಾರೆ. ಡೈರೆಕ್ಟರ್ಸ್‌ಗಳ ಡಾರ್ಲಿಂಗ್ ಶಿವಣ್ಣನಿಗೆ ಪವನ್ ಆಕ್ಷನ್ ಕಟ್ ಹೇಳುತ್ತಿರುವ ಖುಷಿಯಲ್ಲಿದ್ದಾರೆ. ಬರೀ ನಿರ್ದೇಶಕರಾಗಿ ಮಾತ್ರವಲ್ಲದೇ ಪವನ್ ಒಡೆಯರ್ ನಿರ್ಮಾಪಕರಾಗಿಯೂ ಹೆಸರು ಮಾಡಿದ್ದಾರೆ. ಡೊಳ್ಳು ಚಿತ್ರ ನಿರ್ಮಾಣ ಮಾಡುವ ಮೂಲಕ ನಿರ್ಮಾಪಕರಾಗಿ ಸಿನಿರಂಗದಲ್ಲಿ ಅದೃಷ್ಟ ಪರೀಕ್ಷೆಗಿಳಿದಿದ್ದ ಅವರು ಮೊದಲ ಚಿತ್ರ ನಿರ್ಮಾಣದಲ್ಲಿಯೇ ರಾಷ್ಟ್ರ ಪ್ರಶಸ್ತಿ ಪಡೆದುಕೊಂಡಿದ್ದಾರೆ. ಅವಸ್ತಿತ ಅವಸ್ತಿ ಎಂಬ ಬಾಲಿವುಡ್ ಚಿತ್ರ ನಿರ್ಮಿಸಿರುವ ಅವರು ಸದ್ಯ ವೆಂಕ್ಯಾ ಚಿತ್ರ ನಿರ್ಮಿದ್ದಾರೆ. ಈಗ ಅವರು ತಮ್ಮ ಒಡೆಯರ್ ಮೂವೀಸ್ ಬ್ಯಾನರ್‌ನಡಿ ನಾಲ್ಕನೇ ಚಿತ್ರ ನಿರ್ಮಿಸುತ್ತಿದ್ದಾರೆ.



## ತೆಲುಗಿನ ಸಂಸ್ಥೆಯಲ್ಲಿ ಶ್ರೀಮುರಳಿ..

ಬಘೀರ ಸಿನಿಮಾ ಮೂಲಕ, ಹಿಟ್ ಪಡೆದ ನಟ, ರೋರಿಂಗ್ ಸ್ಟಾರ್ ಶ್ರೀಮುರಳಿ ಅವರ ಮುಂದಿನ ಸಿನಿಮಾ ಯಾವುದು? ಸದ್ಯಕ್ಕೆ ಈ ಪ್ರಶ್ನೆಗೆ ಇಲ್ಲಿಯವರೆಗೂ ಉತ್ತರ ಸಿಕ್ಕಿರಲಿಲ್ಲ. ಇದೀಗ ಶ್ರೀಮುರಳಿ ಬರ್ತಡೇ ಪ್ರಯುಕ್ತ ಮುಂದಿನ ಸಿನಿಮಾ ಬಗ್ಗೆ ಅಪ್ಡೇಟ್ ಸಿಕ್ಕಿದೆ. ತೆಲುಗಿನ ಖ್ಯಾತ ಚಿತ್ರ ನಿರ್ಮಾಣ ಸಂಸ್ಥೆ ಪೀಪಲ್ ಮೀಡಿಯಾ ಫ್ಯಾಕ್ಟರಿ ಜತೆಗೆ ಕೈ ಜೋಡಿಸಿದ್ದಾರೆ. ಅಂದರೆ ಈ ಸಂಸ್ಥೆ ನಿರ್ಮಾಣ ಮಾಡಲಿರುವ ಸಿನಿಮಾದಲ್ಲಿ ನಾಯಕನಾಗಿ ಶ್ರೀಮುರಳಿ ನಟಿಸಲಿದ್ದಾರೆ. ಪೀಪಲ್ ಮೀಡಿಯಾ ಫ್ಯಾಕ್ಟರಿ ಈ ಸಿನಿಮಾ ನಿರ್ಮಾಣದ ಮೂಲಕ ಕನ್ನಡ ಚಿತ್ರೋದ್ಯಮ ಪ್ರವೇಶಿಸುತ್ತಿದೆ. ಈಗಾಗಲೇ ಕನ್ನಡದ ನಿರ್ಮಾಣ ಸಂಸ್ಥೆಗಳು ಪರಭಾಷೆ ಸಿನಿಮಾ ನಿರ್ಮಾಣದಲ್ಲಿ ತೊಡಗಿವೆ. ಈಗ ಬೇರೆ ಭಾಷೆ ಸಂಸ್ಥೆ ಕನ್ನಡಕ್ಕೆ ಆಗಮಿಸಿದೆ. ಇವರ ಸಿನಿಮಾದಲ್ಲಿ ಶ್ರೀಮುರಳಿ ಅಭಿನಯಿಸುತ್ತಿರುವುದು ಅಭಿಮಾನಿಗಳಲ್ಲಿ ಕುತೂಹಲ ಮೂಡಿಸಿದೆ.









Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212